ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು

ಸಿ.ಸಿ.1534/2019

| | | | |
|---|---|---|---|
| ಸಾಕ್ಷಿದಾರರ ಹೆಸರು | ಶಿವಕುಮಾರ ಯಾನೆ ಶಿವು | ಪ್ರಮಾಣ ಮಾಡಿದ ದಿನಾಂಕ | 19.06.2023 |
| ತಂದೆಯ ಹೆಸರು | ಹುಲಿಯಪ್ಪ | | |
| ವಯಸ್ಸು | 35 ವರ್ಷ | | |
| ವೃತ್ತಿ | ಚಾಲಕ | ಚಾಸಾ | 2 |
| ವಾಸಸ್ಥಳ | ಕುಪ್ಪಾಳು | ಪ್ರಾಸಾ | 1 |

**<u>ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-</u>**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆ ಆಗಿದ್ದು ಸಾಕ್ಷಿಯು ಅದನ್ನು ನೋಡಿ ಗುರ್ತಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು. ನಿಪಿ-1 ರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲಿಸರ ಕೋರಿಕೆ ಮೇರೆಗೆ ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಅದು ಯಾವ ದಾಖಲೆ ಎಂದು ನನಗೆ ಗೊತ್ತಿರುವುದಿಲ್ಲ. ಮಹಜರನ್ನು ಎಷ್ಟರಿಂದ ಎಷ್ಟು ಗಂಟೆಯವರೆಗು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಮಹಜರ್ ಗೆ ಸಹಕರಿಸಲು ನೀಡಿದ ನೋಟೀಸನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯ ಸಾಕ್ಷಿ ಹೇಳಿಕೆ ಬಾಂಡ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ರಲ್ಲಿರುವ ವಿಚಾರಗಳು ಗೊತ್ತಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**<u>ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-</u>**

ದಿಃ15.11.2018 ರಂದು ಪೋಲೀರು ಚಾಸಾ-3 ರವರ ಸಮಕ್ಷಮ ಚಾಸಾ-4 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಪಂಚನಾಮೆಯನ್ನು ಬೆಳಗ್ಗೆ 8.00 ರಿಂದ 8.30 ಗಂಟೆಯವರೆಗು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ಗೆ ಸಹಕರಿಸುವಂತೆ ನಿಪಿ-2 ರಂತೆ ನೋಟಿಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-3 ರಂತೆ ಸಾಕ್ಷಿ ಹೇಳಿಕೆಯ ಬಾಂಡನ್ನು ಪಡೆದಿರುತ್ತಾರೆ ಎದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರು ಯಾವುದೇ ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**<u>ಮರು ವಿಚಾರಣೆಃ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು